/339167/2022

ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ,ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012

ಇ-ಮೇಲ್:commissioner.pue@gmail.com ಸ್ಥಿರ ದೂರವಾಣಿ ಸಂ:080-23562033

ಸಂಖ್ಯೆ:ಪಪೂಶಿಇ/ಆಡಳಿತ-1/ಜಿಪಿಎಲ್/ಸಿಆರ್-01/ಪ್ರಾವರ್ಗ/01/2022-23

ದಿನಾಂಕ: 15-11-2022

## ಜ್ಞಾಪನ

**ವಿಷಯ:-** 2022-23ನೇ ಶೈಕ್ಷಣಿಕ ಸಾಲಿನಲ್ಲಿ ನಡೆಸಲಾದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ **ಸಾಮಾನ್ಯ ವರ್ಗಾವಣೆ** ಕೌನ್ಸೆಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡವರಿಗೆ ವರ್ಗಾವಣೆ ಆದೇಶ ಹೊರಡಿಸುವ ಬಗ್ಗೆ.

**ಉಲ್ಲೇಖ:-**

1. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 12 ಶಾಸನ 2020, ದಿನಾಂಕ: 27-03-2020.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 47 ಶಾಸನ 2021, ದಿನಾಂಕ: 18-01-2022.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 32 ಟಿಪಿಯು 2021, ದಿನಾಂಕ:12-05-2022.
4. ಈ ಕಚೇರಿ ಸಮಸಂಖ್ಯೆ ವರ್ಗಾವಣಾ ಮಾರ್ಗಸೂಚಿ ದಿನಾಂಕ:18-05-2022.
5. ಈ ಕಛೇರಿಯ ಜ್ಞಾಪನ ಸಮಸಂಖ್ಯೆ ದಿನಾಂಕ: 13-09-2022.
6. ಈ ಕಚೇರಿ ಸಮಸಂಖ್ಯೆ ಜ್ಞಾಪನ ದಿನಾಂಕ: 27-10-2022 ಮತ್ತು 07-11-2022.

*****

2022-23ನೇ ಶೈಕ್ಷಣಿಕ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ವರ್ಗಾವಣೆಯನ್ನು ನಡೆಸಲು ಉಲ್ಲೇಖ-1, 2 ಹಾಗೂ 3ರ ಅಧಿಸೂಚನೆಗಳಲ್ಲಿ ಅವಕಾಶ ಕಲ್ಪಿಸಲಾಗಿದೆ. ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರುಗಳಿಗೆ 2022-23ನೇ ಶೈಕ್ಷಣಿಕ ಸಾಲಿನ ವರ್ಗಾವಣೆಗಾಗಿ ಆನ್-ಲೈನ್ ಅರ್ಜಿ ಸಲ್ಲಿಸಲು ಉಲ್ಲೇಖ-4ರಲ್ಲಿ ಆದೇಶಿಸಲಾಗಿದೆ. ಅದರಂತೆ, ವಿವಿಧ ವಿಷಯಗಳ ಪ್ರಾಂಶುಪಾಲರುಗಳು ಸಲ್ಲಿಸಲಾಗಿದ್ದ 46 ಆನ್-ಲೈನ್ ಅರ್ಜಿಗಳನ್ನು ಪರಿಶೀಲಿಸಿ, ದಾಖಲೆಗಳ ಕೊರತೆಯಿಂದ ಹಾಗೂ ತಪ್ಪು ಆದ್ಯತೆಯಡಿ ಸಲ್ಲಿಸಲಾಗಿದ್ದ 06 ಅರ್ಜಿಗಳನ್ನು ಜಿಲ್ಲಾ ಉಪ ನಿರ್ದೇಶಕರ ಕಚೇರಿಗೆ ಕಳುಹಿಸಿ, ಸದರಿ ಆಕ್ಷೇಪಣೆಗಳನ್ನು ಸರಿಪಡಿಸಿ ಅರ್ಹ ಮತ್ತು ಅನರ್ಹ ಅರ್ಜಿಗಳನ್ನು ಪರಿಶೀಲಿಸಿ ಸಲ್ಲಿಸುವಂತೆ ಉಲ್ಲೇಖ-5ರಂತೆ ಸೂಚಿಸಲಾಗಿತ್ತು.

ಅದರಂತೆ, ಜಿಲ್ಲಾ ಉಪ ನಿರ್ದೇಶಕರಿಂದ ಸ್ವೀಕೃತಗೊಂಡ ಆಕ್ಷೇಪಣೆಗಳನ್ನು ಪರಿಶೀಲಿಸಿ, ದಿನಾಂಕ: 13-10-2022ರಲ್ಲಿ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗಿತ್ತು. ಆದರೂ, ಕೆಲವೊಂದು ಆಕ್ಷೇಪಣೆಗಳು ಸ್ವೀಕೃತಗೊಂಡಿರುತ್ತವೆ. ಅವುಗಳನ್ನು ಸಹ ಪರಿಶೀಲಿಸಿ ದಿನಾಂಕ: 27-10-2022ರಂದು ಪರಿಷ್ಕೃತ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗಿದೆ. ಇದರೊಂದಿಗೆ ಖಾಲಿ ಹುದ್ದೆಗಳ ಪರಿಷ್ಕೃತ ಅಂತಿಮ ಪಟ್ಟಿಯನ್ನು ದಿನಾಂಕ: 07-11-2022ರಂದು ಪ್ರಕಟಿಸಲಾಗಿದೆ.

2022-23ನೇ ಶೈಕ್ಷಣಿಕ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳ ಸಾಮಾನ್ಯ ವರ್ಗಾವಣೆಯನ್ನು ನಡೆಸುವ ಸಲುವಾಗಿ ವಿವಿಧ ಆದ್ಯತೆಯಡಿಯಲ್ಲಿ ಅರ್ಜಿ ಸಲ್ಲಿಸಲಾದ ಪ್ರಾಂಶುಪಾಲರುಗಳಿಗೆ ದಿನಾಂಕ: 10-11-2022ರಂದು ಸ್ಥಳ ನಿಯುಕ್ತಿಗೊಳಿಸಿ ಕೌನ್ಸೆಲಿಂಗ್ ನಡೆಸಲಾಗಿರುತ್ತದೆ. ಆನ್-ಲೈನ್ ಕೌನ್ಸೆಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಂಶುಪಾಲರುಗಳಿಗೆ ಈ ಪತ್ರದೊಂದಿಗಿನ ಅನುಬಂಧದಲ್ಲಿ ಅವರ ಹೆಸರಿನ ಎದುರಿಗೆ ನಮೂದಿಸಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದೆ.

<u>ಷರತ್ತುಗಳು:-</u>

1. ವರ್ಗಾವಣೆ ಹೊಂದಿರುವ ಪ್ರಾಂಶುಪಾಲರು ಈ ಆದೇಶ ಹೊರಡಿಸಿದ ದಿನಾಂಕದಿಂದ ಕರ್ನಾಟಕ ಸರ್ಕಾರಿ ಸೇವಾ ನಿಯಮಗಳ ನಿಯಮ 78ರನ್ವಯ 10 ದಿನಗಳ ಒಳಗಾಗಿ ಕರ್ತವ್ಯದಿಂದ ಬಿಡುಗಡೆಗೊಂಡು, ವರ್ಗಾವಣೆಗೊಂಡಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳತಕ್ಕದ್ದು. ಕರ್ತವ್ಯದಿಂದ ಬಿಡುಗಡೆ/ವರದಿ ಮಾಡಿಕೊಳ್ಳದಿದ್ದವರ ಮೇಲೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.
2. ಪ್ರಾಂಶುಪಾಲರ ವರ್ಗಾವಣೆಯು ಆನ್-ಲೈನ್ ಕೌನ್ಸೆಲಿಂಗ್ ಮೂಲಕ ಆಗಿರುವುದರಿಂದ, ಸ್ಥಳ ನಿಯುಕ್ತಿಗೊಳಿಸಿರುವ ಕಾಲೇಜನ್ನು ಮಾರ್ಪಾಡುಗೊಳಿಸಲು ಅವಕಾಶ ಇರುವುದಿಲ್ಲ.
3. ಸುಳ್ಳು ಮಾಹಿತಿ ಹಾಗೂ ದಾಖಲೆ ಸಲ್ಲಿಸಿ, ಅರ್ಹತೆಯಡಿ ಪ್ರಾಂಶುಪಾಲರು ವರ್ಗಾವಣೆ ಪಡೆದಿರುವುದು ಕಂಡುಬಂದಲ್ಲಿ, ವರ್ಗಾವಣಾ ಆದೇಶವನ್ನು ರದ್ದುಪಡಿಸಲಾಗುವುದು ಹಾಗೂ ನಿಯಮಾನುಸಾರ ಕ್ರಮಕೈಗೊಳ್ಳಲಾಗುವುದು.
4. ಪ್ರಾಂಶುಪಾಲರ ವರ್ಗಾವಣೆಯು ಸಾಮಾನ್ಯ ವರ್ಗಾವಣೆ ಕೌನ್ಸಲಿಂಗ್ ಮೂಲಕ ಆಗಿರುವುದರಿಂದ ಪ್ರಯಾಣ ಭತ್ಯೆ ಹಾಗೂ ಸೇರಿಕೆ ಕಾಲಕ್ಕೆ ಅರ್ಹರಾಗುವುದಿಲ್ಲ.
5. ವರ್ಗಾವಣೆ ಹೊಂದಿರುವ ಪ್ರಾಂಶುಪಾಲರು ಕರ್ತವ್ಯದಿಂದ ಬಿಡುಗಡೆ ಹೊಂದಿದ ಹಾಗೂ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರಿಗೆ ಮಾಹಿತಿ/ದಾಖಲೆಗಳನ್ನು ಸಲ್ಲಿಸತಕ್ಕದ್ದು. ಜಿಲ್ಲಾ ಉಪ ನಿರ್ದೇಶಕರು, ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ವರ್ಗಾವಣೆ ಹೊಂದಿದ ಪ್ರಾಂಶುಪಾಲರು ಮಾಹಿತಿಯನ್ನು ಕ್ರೋಢೀಕರಿಸಿ ನಿರ್ದೇಶನಾಲಯಕ್ಕೆ ಸಲ್ಲಿಸತಕ್ಕದ್ದು.

Signed by Ramachandran R
Date: 15-11-2022 16:10:05

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

<u>ರವರಿಗೆ:</u>

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರುಗಳಿಗೆ – ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು – ಇವರಿಗೆ ಇಲಾಖಾ ಜಾಲತಾಣದಲಿ ಪ್ರಕಟಿಸುವ ಸಲುವಾಗಿ.
4. ಸರ್ಕಾರಿ ಪದವಿ ಪೂರ್ವ ಕಾಲೇಜಿನ ಎಲ್ಲಾ ಪ್ರಾಂಶುಪಾಲರಿಗೆ - ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
5. ಕಚೇರಿ/ಹೆಚ್ಚುವರಿ ಪ್ರತಿ.